# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103 ☎ : 0816-2255650, 2273511 ಫ್ಯಾಕ್ಸ್ :0816-2270719

ಸಂಖ್ಯೆ:ತುವಿ: ಪ.ವಿ:ಯು.ಜಿ.:ಪ.ಶುಲ್ಕ.:2016-17 : 976

ದಿನಾಂಕ: 25.10.2016

## ಅಧಿಸೂಚನೆ

ವಿಷಯ: 2016 ರ ನವಂಬರ್/ಡಿಸೆಂಬರ್ ಮಾಹೆಗಳಲ್ಲಿ ನಡೆಯಲಿರುವ ವಿವಿಧ ಸ್ನಾತಕ ಪದವಿ ಸೆಮಿಸ್ಟರ್‌ಗಳು ಮತ್ತು ವಾರ್ಷಿಕ ಪದ್ಧತಿಯ ಬಿ.ಎ/ಬಿ.ಕಾಂ. ಪದವಿಗಳಿಗೆ ಸಂಬಂಧಿಸಿದಂತೆ 2005-06 ನೇ ಶೈಕ್ಷಣಿಕ ಸಾಲಿನಿಂದ 2010-11 ನೇ ಶೈಕ್ಷಣಿಕ ಸಾಲಿನವರೆಗೆ ಪ್ರವೇಶ ಪಡೆದು Double the Duration ಅವಧಿ ಮುಗಿದು ಅನುತ್ತೀರ್ಣರಾಗಿರುವ (ಈಗಾಗಲೇ ಶುಲ್ಕ ಪಾವತಿಸಿರುವ 2009-10 ನೇ ಸಾಲಿನ ವಿದ್ಯಾರ್ಥಿಗಳನ್ನು ಹೊರತುಪಡಿಸಿ) ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 24.10.2016

*****

2016 ರ ನವಂಬರ್/ ಡಿಸೆಂಬರ್ ಮಾಹೆಗಳಲ್ಲಿ ನಡೆಯಲಿರುವ ವಿವಿಧ ಸ್ನಾತಕ ಪದವಿ ಸೆಮಿಸ್ಟರ್ ಪದ್ಧತಿಯ ಪರೀಕ್ಷೆಗಳಾದ ಬಿ.ಎ./ಬಿ.ಎಸ್.ಡಬ್ಲ್ಯು./ಬಿ.ಎಸ್ಸಿ./ಬಿ.ಸಿ.ಎ./ಬಿ.ಕಾಂ./ಬಿ.ಬಿ.ಎಂ. ಪದವಿಗಳ I, III & V ನೇ ಸೆಮಿಸ್ಟರ್, ಬಿ.ಎ. ಇಂಟಿಗ್ರೇಟೆಡ್ ಕನ್ನಡ ಪಂಡಿತ್ ಪದವಿಯ V, VII & IX ನೇ ಸೆಮಿಸ್ಟರ್, ಬಿ.ಎಫ್.ಎ. ಪದವಿಯ I, III, V, VII & IX ನೇ ಸೆಮಿಸ್ಟರ್ ಮತ್ತು ವಾರ್ಷಿಕ ಪದ್ಧತಿಯ ಬಿ.ಎ./ಬಿ.ಕಾಂ. ಪದವಿಗಳ I, II & III ನೇ ವರ್ಷಕ್ಕೆ ಸಂಬಂಧಿಸಿದಂತೆ 2005-06 ನೇ ಶೈಕ್ಷಣಿಕ ಸಾಲಿನಿಂದ 2010-11 ನೇ ಶೈಕ್ಷಣಿಕ ಸಾಲಿನವರೆಗೆ ಪ್ರವೇಶ ಪಡೆದು Double the Duration ಅವಧಿ ಮುಗಿದು ಅನುತ್ತೀರ್ಣರಾಗಿರುವ (ಈಗಾಗಲೇ ಶುಲ್ಕ ಪಾವತಿಸಿರುವ 2009-10 ನೇ ಸಾಲಿನ ವಿದ್ಯಾರ್ಥಿಗಳನ್ನು ಹೊರತುಪಡಿಸಿ) ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳ ಶುಲ್ಕದ ವಿವರಗಳನ್ನು ವಿಷಯದೊಂದಿಗೆ ಆನ್‌ಲೈನ್‌ನಲ್ಲಿ ನಮೂದಿಸುವುದು

ಆನ್‌ಲೈನ್ ಪರೀಕ್ಷಾ ಅರ್ಜಿಗಳ ಆಧಾರದಲ್ಲಿ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲಿದ್ದು, ಪ್ರತ್ಯೇಕವಾಗಿ ಪ್ರಶ್ನೆ ಪತ್ರಿಕೆ ಕೋರಿಕೆ ಪಟ್ಟಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ವಿಷಯಗಳಿಗೆ/ಪತ್ರಿಕೆಗಳಿಗೆ ಕೋಡ್‌ಗಳನ್ನು ಪರಿಶೀಲಿಸಿ ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಯನ್ನು ಸಲ್ಲಿಸತಕ್ಕದ್ದು. ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿಷಯ/ಪತ್ರಿಕೆಗಳ ಕೋಡ್‌ನ್ನು ತಪ್ಪಾಗಿ ನಮೂದಿಸಿದಲ್ಲಿ ಈ ಕಾರಣದಿಂದಾಗಿ ಪ್ರಶ್ನೆ ಪತ್ರಿಕೆಯಲ್ಲಿನ ಸರಬರಾಜು ಮಾಡುವುದರಲ್ಲಿ ವ್ಯತ್ಯಾಸವಾದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರನ್ನೇ ನೇರವಾಗಿ ಜವಾಬ್ದಾರರನ್ನಾಗಿ ಮಾಡಲಾಗುವುದು.

## ಗಮನಿಸಬೇಕಾದ ದಿನಾಂಕಗಳು

| | | |
|---|---|---|
| 1. | ವಿದ್ಯಾರ್ಥಿಗಳಿಗೆ ದಂಡ ರಹಿತ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 08.11.2016 |
| 2 | ಕಾಲೇಜಿನವರು ಆನ್‌ಲೈನ್‌ನಲ್ಲಿ ನಮೂದಿಸಲು ಕೊನೆಯ ದಿನಾಂಕ | 09.11.2016 |
| 3. | ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 10.11.2016 |

(...2)

| ಕ್ರ.ಸಂ | ಸೆಮಿಸ್ಟರ್/ವಾರ್ಷಿಕ | ಕೋರ್ಸ್ | ಪೂರಕ (ಒಂದು ವಿಷಯಕ್ಕೆ) |
|---|---|---|---|
| 1. | I,III & V | ಬಿ.ಎ./ಬಿ.ಎಸ್.ಡಬ್ಲ್ಯೂ./ಬಿ.ಎಸ್ಸಿ./ಬಿ.ಕಾಂ./ ಬಿ.ಬಿ.ಎಂ./ಬಿ.ಸಿ.ಎ. | ರೂ. 100-00 |
| 2. | V,VII & IX | ಬಿ.ಎ. ಕನ್ನಡ ಪಂಡಿತ್ ಪದವಿ | ರೂ. 100-00 |
| 3. | I,III, V,VII & IX | ಬಿ.ಎಫ್.ಎ | ರೂ. 100-00 |
| 4. | I, II & III ವಾರ್ಷಿಕ | ಬಿ.ಎ./ಬಿ.ಕಾಂ. (ಪುನರಾವರ್ತಿತ) | ರೂ. 100-00 |

ಪರೀಕ್ಷಾ ಶುಲ್ಕದಲ್ಲಿ ರಿಯಾಯಿತಿ ಪಡೆದಿರುವ ವಿದ್ಯಾರ್ಥಿಗಳೂ ಸಹ ಈ ಕೆಳಗೆ ನಮೂದಿಸಿರುವ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸುವುದು.

| ಕ್ರ.ಸಂ | ಇತರೆ ಶುಲ್ಕಗಳ ವಿವರ | ಮೊತ್ತ (ರೂ.ಗಳಲ್ಲಿ) |
|---|---|---|
| 1. | ಅಂಕಪಟ್ಟಿ ಶುಲ್ಕ( ಪ್ರತಿ ಸೆಮಿಸ್ಟರ್‌ಗೆ) | 150-00 |
| 2. | ಆನ್‌ಲೈನ್ ಅರ್ಜಿ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 25-00 |
| 3. | ಅರ್ಜಿ ಪರಿಶೀಲನಾ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 10-00 |
| 4. | ಪರೀಕ್ಷಾ ಸಿದ್ಧತಾ ಶುಲ್ಕ (Process fee) ( ಪ್ರತಿ ಸೆಮಿಸ್ಟರ್‌ಗೆ) | 35-00 |
| 5. | ಪ್ರಾಯೋಗಿಕ ಪರೀಕ್ಷಾ ಶುಲ್ಕ ( ಒಂದು ವಿಷಯಕ್ಕೆ) | 50-00 |
| 6. | ಮೌಖಿಕ ಸಂದರ್ಶನ (UG Viva ) ( ಒಂದು ವಿಷಯಕ್ಕೆ) | 150-00 |
| 7. | ಪ್ರಾಜೆಕ್ಟ್ ವ್ಯಾಲ್ಯೂವೇಷನ್ (UG Project Evaluation ) ( ಒಂದು ವಿಷಯಕ್ಕೆ) | 100-00 |

*ಅರ್ಜಿ ಪರಿಶೀಲನಾ ಶುಲ್ಕ **ರೂ.10-00** ಗಳಲ್ಲಿ ರೂ. 06-00 ಗಳನ್ನು ಪರೀಕ್ಷಾ ಕೇಂದ್ರದಲ್ಲಿ ಉಳಿಸಿಕೊಂಡು ಉಳಿದ ರೂ.04-00 ಗಳನ್ನು ವಿಶ್ವವಿದ್ಯಾನಿಲಯದ ಖಾತೆಗೆ ಜಮಾ ಮಾಡುವುದು.

*ಆನ್‌ಲೈನ್ ಅರ್ಜಿ ಶುಲ್ಕ **ರೂ.25-00** ಗಳಲ್ಲಿ ರೂ.05-00ಗಳನ್ನು ಕಾಲೇಜಿನವರು ಉಳಿಸಿಕೊಂಡು ಉಳಿದ ರೂ.20-00 ಗಳನ್ನು ವಿಶ್ವವಿದ್ಯಾನಿಲಯದ ಖಾತೆಗೆ ಜಮಾ ಮಾಡುವುದು.

## ಶುಲ್ಕ ವಿನಾಯಿತಿ

**ಸಂಬಂಧಪಟ್ಟ ಇಲಾಖೆಗಳಿಂದ ಈಗಾಗಲೇ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಿದಂತಹ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕದಲ್ಲಿ ವಿನಾಯಿತಿ ಪಡೆಯಲು ಅರ್ಹರಿರುತ್ತಾರೆ.**

1. **ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ:**
   ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಎಲ್ಲಾ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ಮಿತಿ **ರೂ.2.50** ಲಕ್ಷದೊಳಗಿದ್ದು, ಪುನರಾವರ್ತಿತ(Repeaters exam) ಪರೀಕ್ಷೆಗಳಿಗೆ ಶುಲ್ಕ ವಿನಾಯಿತಿ ಪಡೆಯಲು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳನ್ನು ಹೊರತುಪಡಿಸಿ ಉಳಿದ ವಿದ್ಯಾರ್ಥಿಗಳು ಅರ್ಹರಾಗಿರುವುದಿಲ್ಲ).

**ಯಾವುದೇ ಕಾರಣಕ್ಕೂ ಪರೀಕ್ಷಾ ಕೇಂದ್ರವನ್ನು ಬದಲಾಯಿಸುವಂತಿಲ್ಲ.**

25/10/16

(...3

ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ವಿಶ್ವವಿದ್ಯಾನಿಲಯದ ಪರವಾಗಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ಸಂಗ್ರಹಿಸಿ, ನಂತರ ಒಟ್ಟು ಶುಲ್ಕವನ್ನು ಕ್ರೋಢೀಕರಿಸಿ ವಿಶ್ವವಿದ್ಯಾನಿಲಯದ ನಿಧಿಗೆ RTGS/NEFT **ಮೂಲಕ ಎಸ್.ಬಿ.ಎಂ. ಖಾತೆ ನಂ.54040241380 ಗೆ ಪರೀಕ್ಷಾ ಶುಲ್ಕವನ್ನು ದಿನಾಂಕ 10.11.2016 ರೊಳಗೆ ಪಾವತಿಸಿ** ಮತ್ತು ಪರೀಕ್ಷಾ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳ ಪಟ್ಟಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ (ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ನಕಲು ಪ್ರತಿ) ಪ್ರಾಂಶುಪಾಲರು ದೃಢೀಕರಿಸಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು. **ಪರೀಕ್ಷಾ ಶುಲ್ಕದ ಹಣಕಾಸು ಪಟ್ಟಿಯನ್ನು ದ್ವಿಪ್ರತಿಗಳಲ್ಲಿ. (ಪರೀಕ್ಷಾಂಗ ವಿಭಾಗಕ್ಕೆ ಒಂದು ಪ್ರತಿ ಮತ್ತು ಹಣಕಾಸು ವಿಭಾಗಕ್ಕೆ ಒಂದು ಪ್ರತಿಯನ್ನು ತಪ್ಪದೇ ಸಲ್ಲಿಸುವುದು).**

ಸೈದ್ಧಾಂತಿಕ (ಪಠ್ಯ ವಿಷಯ - Theory) ಪರೀಕ್ಷೆಗಳ ವಿವರಗಳನ್ನೊಳಗೊಂಡ ವೇಳಾಪಟ್ಟಿಯನ್ನು ಮುಂದೆ ತಿಳಿಸಲಾಗುವುದು.

ಎಲ್ಲಾ ಪ್ರಾಂಶುಪಾಲರುಗಳು ಸಹಕರಿಸಬೇಕಾಗಿ ಕೋರಲಾಗಿದೆ.

**ಆನ್‌ಲೈನ್‌ನಲ್ಲಿ ನಮೂದಿಸುವಾಗ ಏನಾದರೂ ಸಮಸ್ಯೆ ಉಂಟಾದಲ್ಲಿ ಹೆಚ್ಚಿನ ಮಾಹಿತಿಗಾಗಿ ಗಣಕಯಂತ್ರ ವಿಭಾಗದವರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸುವುದು. (ಮೊಬೈಲ್ ಸಂಖ್ಯೆ: 7624853485)**

ಕುಲಸಚಿವರು(ಮೌಲ್ಯಮಾಪನ)

**ಗೆ,**

**ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

**ಪ್ರತಿಗಳು:**

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಉಪಕುಲಸಚಿವರು(ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು - ವಿಶ್ವವಿದ್ಯಾನಿಲಯದ ಅಂತರ್ಜಾಲ (Website)ದಲ್ಲಿ ಇಂದೇ ಪ್ರಕಟಿಸುವುದು.
8. ಫಲಿತಾಂಶ ಗಣಕೀಕರಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
9. ಕಛೇರಿ ಪ್ರತಿ.

40